ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

ATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

2

ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಸದಸ್ಯರು

ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 1-12-2020

# ಹಳ್ಳಿಹಕ್ಕಿಗೆ ಶಾಕ್

## ಎಚ್.ವಿಶ್ವನಾಥ್‌ಗಿಲ್ಲ ಸಚಿವಸ್ಥಾನ

**ನಾಮನಿರ್ದೇಶನ ಆಗಿರುವುದಕ್ಕೆ ಮಂತ್ರಿಗಿರಿಗೆ ಅನರ್ಹ**

**ಚುನಾವಣೆಯಲ್ಲಿ ಗೆದ್ದ ಎಂಟಿಬಿ, ಶಂಕರ್ ಅರ್ಹರು**

**ಹೈಕೋರ್ಟ್‌ನಿಂದ ಮಹತ್ವದ ಮಧ್ಯಂತರ ಆದೇಶ**

• ಕನ್ನಡಪ್ರಭ ವಾರ್ತೆ ಬೆಂಗಳೂರು 1/12

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸರ್ಕಾರದಲ್ಲಿ ಸಚಿವ ಸ್ಥಾನ ಪಡೆಯಬೇಕೆಂಬ ವಿಧಾನಪರಿಷತ್ ಸದಸ್ಯ ಎಚ್.ವಿಶ್ವನಾಥ್ ಕನಸಿಗೆ ತಣ್ಣೀರು ಎರಚಿರುವ ಹೈಕೋರ್ಟ್, ಇನ್ನಿಬ್ಬರು ಪರಿಷತ್ ಸದಸ್ಯರಾದ ಎಂ.ಟಿ.ಬಿ.ನಾಗರಾಜ್ ಮತ್ತು ಆರ್.ಶಂಕರ್ ಅವರು ಸಚಿವರಾಗುವ ಹಾದಿಯನ್ನು ಸುಗಮಗೊಳಿಸಿದೆ.



ಶಾಸಕ ಸ್ಥಾನದಿಂದ ಅನರ್ಹಗೊಂಡು ಉಪ ಚುನಾವಣೆಯಲ್ಲಿ ಮರು ಆಯ್ಕೆಯಾಗದ ಕಾರಣ ಸಚಿವ ಸ್ಥಾನ ಪಡೆಯಲು ವಿಶ್ವನಾಥ್ ಅವರು ಅನರ್ಹರಾಗಿದ್ದಾರೆ.

» 9

### ಮಂತ್ರಿಗಿರಿ ಏಕಿಲ್ಲ?

ಯಾವುದೇ ಪಕ್ಷಕ್ಕೆ ಸೇರಿದ ವಿಧಾನಸಭೆ ಅಥವಾ ವಿಧಾನ ಪರಿಷತ್ ಸದಸ್ಯ ಶಾಸಕ ಸ್ಥಾನದಿಂದ ಅನರ್ಹಗೊಂಡರೆ, ಮರು ಆಯ್ಕೆಯಾಗುವವರೆಗೆ ಅವರನ್ನು ಸಚಿವ ಸ್ಥಾನಕ್ಕೆ ಪರಿಗಣಿಸಬಾರದು ಎಂದು ಸಂವಿಧಾನದ ಪರಿಚ್ಛೇದ 164 (1ಬಿ) ಹಾಗೂ 361 (ಬಿ) ಹೇಳುತ್ತದೆ. ವಿಶ್ವನಾಥ್ ವಿಧಾನಸಭೆಗಾಗಲೀ, ಪರಿಷತ್ತಿಗಾಗಲೀ ಆಯ್ಕೆಯಾಗಿಲ್ಲ. ಪರಿಷತ್‌ಗೆ ಸಾಹಿತ್ಯ ಕ್ಷೇತ್ರದಿಂದ ನಾಮನಿರ್ದೇಶನಗೊಂಡಿದ್ದಾರೆ. ಹೀಗಾಗಿ ಅವರು ಸಚಿವ ಸ್ಥಾನಕ್ಕೆ ಅನರ್ಹರು.

**ಕೋರ್ಟ್ ತೀರ್ಪು** ವಿಧಾನ ಪರಿಷತ್‌ಗೆ ನಾಮನಿರ್ದೇಶನ ಆಗಿರುವುದರಿಂದ ಕೈತಪ್ಪಿದ ಅವಕಾಶ

# ಹಳ್ಳಿಹಕ್ಕಿ ವಿಶ್ವನಾಥ್‌ಗೆ ಹೈಕೋರ್ಟ್ ಶಾಕ್

3ನೇ ಪುಟದಿಂದ

ಹಾಗಾಗಿ ವಿಶ್ವನಾಥ್ ಅವರ ಹೆಸರನ್ನು ಸಚಿವ ಸ್ಥಾನಕ್ಕೆ ಶಿಫಾರಸು ಮಾಡುವಾಗ ಮುಖ್ಯಮಂತ್ರಿಗಳು ಈ ಅಂಶವನ್ನು ಪರಿಗಣಿಸಬೇಕು ಎಂದು ಹೈಕೋರ್ಟ್ ತನ್ನ ಮಧ್ಯಂತರ ಆದೇಶದಲ್ಲಿ ತಿಳಿಸಿದೆ.



ಆದರೆ ಎಂ.ಟಿ.ಬಿ.ನಾಗರಾಜ್ ಮತ್ತು ಆರ್.ಶಂಕರ್ ಅವರು ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆದ ಚುನಾವಣೆಯಲ್ಲಿ ಆಯ್ಕೆಯಾಗಿರುವುದರಿಂದ ಅವರಿಗೆ ಸಚಿವಸ್ಥಾನನೀಡದಂತೆಅರ್ಜಿದಾರರು ಕೋರಿರುವ ಮನವಿಯನ್ನು ಪರಿಗಣಿಸಲು ಬರುವುದಿಲ್ಲ ಹೈಕೋರ್ಟ್ ತನ್ನ ಆದೇಶದಲ್ಲಿ ಹೇಳಿದೆ.

ಶಾಸಕ ಸ್ಥಾನದಿಂದ ಅನರ್ಹಗೊಂಡು ನಂತರ ಪರಿಷತ್ ಸದಸ್ಯರಾಗಿರುವ ಎಂ.ಟಿ.ಬಿ.ನಾಗರಾಜ್, ಆರ್.ಶಂಕರ್ ಹಾಗೂ ಎಚ್.ವಿಶ್ವನಾಥ್ ಅವರಿಗೆಸಚಿವಹುದ್ದೆನೀಡದಂತೆ ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ವಕೀಲ ಎ.ಎಸ್. ಹರೀಶ್ ಕುಮಾರ್, ಎಸ್.ರುಕ್ಮಾಂಗದ ಮತ್ತು ಜಿ.ಮೋಹನ್ ಕುಮಾರ್ ಸಲ್ಲಿಸಿದ್ದ ಪ್ರತ್ಯೇಕ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ವಿಚಾರಣೆ ನಡೆಸಿದ್ದ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ ನೇತೃತ್ವದ ವಿಭಾಗೀಯ ಪೀಠ ಸೋಮವಾರ ಈ ಮಧ್ಯಂತರ ಆದೇಶ ಪ್ರಕಟಿಸಿತು.

**ತೀರ್ಪಿನ ಸಾರಾಂಶ:** 'ಯಾವುದೇ ಪಕ್ಷಕ್ಕೆ ಸೇರಿದ ವಿಧಾನಸಭೆ ಅಥವಾ ವಿಧಾನ ಪರಿಷತ್ ಸದಸ್ಯ ಶಾಸಕ ಸ್ಥಾನದಿಂದ ಅನರ್ಹಗೊಂಡರೆ, ಮರು ಆಯ್ಕೆಯಾಗುವವರೆಗೆ ಅವರನ್ನು ಸಚಿವ ಸ್ಥಾನಕ್ಕೆ ಪರಿಗಣಿಸಬಾರದು ಎಂದು ಸಂವಿಧಾನದ ಪರಿಚ್ಛೇದ 164 (1ಬಿ) ಹಾಗೂ 361 (ಬಿ) ಹೇಳುತ್ತದೆ. ವಿಶ್ವನಾಥ್ ವಿಧಾನಸಭೆಗಾಗಲೀ, ಪರಿಷತ್ತಿಗಾಗಲೀ ಆಯ್ಕೆಯಾಗಿಲ್ಲ, ಬದಲಾಗಿ ವಿಧಾನಪರಿಷತ್‌ಗೆ ಸಾಹಿತ್ಯ ಕ್ಷೇತ್ರದಿಂದ ರಾಜ್ಯಪಾಲರಿಂದ ನಾಮನಿರ್ದೇಶನಗೊಂಡಿದ್ದಾರೆ. ಹೀಗಾಗಿ ಅವರು ಸಚಿವ ಸ್ಥಾನ ಪಡೆಯಲು ಅನರ್ಹರಾಗಿದ್ದಾರೆ' ಎಂದು ನ್ಯಾಯಪೀಠ ಹೇಳಿದೆ.

'ಆದರೆ, ಎಂಟಿಬಿ ನಾಗರಾಜ್ ಮತ್ತು ಹಾಗೂ ಆರ್, ಶಂಕರ್ ವಿಧಾನಸಭೆಯಿಂದ ಪರಿಷತ್‌ಗೆ ನಡೆದ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ. ಆದ್ದರಿಂದ ಇವರಿಬ್ಬರಿಗೆ ಸಚಿವ ಸ್ಥಾನ ನೀಡದಂತೆ ಅರ್ಜಿದಾರರು ಕೋರಿರುವ ಮನವಿಯನ್ನು ನ್ಯಾಯಾಲಯ ಈ ಹಂತದಲ್ಲಿ ಪರಿಗಣಿಸಲು ಸಾಧ್ಯವಿಲ್ಲ' ಎಂದು ಆದೇಶದಲ್ಲಿ ತಿಳಿಸಿದೆ.

'ಯಾವುದೇ ನ್ಯಾಯಾಲಯಕ್ಕೆ ರಾಜ್ಯಪಾಲರನ್ನು ವಿಚಾರಣೆ ನಡೆಸಲು ಅಥವಾ ಅವರಿಗೆ ನಿರ್ದೇಶನ ನೀಡಲು ಅವಕಾಶವಿಲ್ಲ. ಆದ್ದರಿಂದಲೇ, ರಾಜ್ಯಪಾಲರನ್ನು ಈ ಅರ್ಜಿಯಿಂದ ಕೈಬಿಡಲಾಗಿದೆ. ಆದರೆ, ಮುಖ್ಯಮಂತ್ರಿಗಳು ವಿಶ್ವನಾಥ್ ಅವರ ಹೆಸರನ್ನು ಸಚಿವ ಸ್ಥಾನಕ್ಕೆ ಶಿಫಾರಸು ಮಾಡುವಾಗ ಅವರು ಸಂವಿಧಾನದ ಪರಿಚ್ಛೇದ 164(1ಬಿ) ಪ್ರಕಾರ ಸಚಿವ ಸ್ಥಾನ ಪಡೆಯಲು ಅನರ್ಹರಾಗಿದ್ದಾರೆ ಎಂಬ ಅಂಶವನ್ನು ಪರಿಗಣಿಸಬೇಕು' ಎಂದು ಆದೇಶದಲ್ಲಿ ತಿಳಿಸಿರುವ ಹೈಕೋರ್ಟ್, ಅರ್ಜಿ ಕುರಿತು ಅಂತಿಮ ತೀರ್ಪು ಪ್ರಕಟಿಸುವವರೆಗೂ ಈ ಮಧ್ಯಂತರ ಆದೇಶ ಜಾರಿಯಲ್ಲಿ ಇರುತ್ತದೆ ಎಂದು ಸ್ಪಷ್ಟಪಡಿಸಿದೆ.

## ಪರಿಚ್ಛೇದ 361 (ಬಿ)

ವಿಧಾನಸಭೆ ಅಥವಾ ವಿಧಾನ ಪರಿಷತ್ ಸದಸ್ಯ ಅನರ್ಹಗೊಂಡರೆ, ಮರು ಆಯ್ಕೆಯಾಗುವವರೆಗೆ ಸಂಭಾವನೆ ಪಡೆಯುವಂತಹ ರಾಜಕೀಯ ಹುದ್ದೆ ಹೊಂದಲು ಅವಕಾಶವಿಲ್ಲ. ಸಾರ್ವಜನಿಕರ ತೆರಿಗೆ ಹಣದಲ್ಲಿ ವೇತನ ಅಥವಾ ಸಂಭಾವನೆನೀಡುವಂತಹ ಹುದ್ದೆಗಳಿಗೆಅವರನ್ನು ನೇಮಕ ಮಾಡುವಂತಿಲ್ಲ

## ಎಂಟಿಬಿ, ಶಂಕರ್ ಅರ್ಹರು ಏಕೆ?

ಎಂಟಿಬಿ ನಾಗರಾಜ್ ಮತ್ತು ಹಾಗೂ ಆರ್. ಶಂಕರ್ ವಿಧಾನಸಭೆಯಿಂದ ಪರಿಷತ್‌ಗೆ ನಡೆದ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ. ಹೀಗಾಗಿ ಅವರು ಸಚಿವ ಸ್ಥಾನ ಪಡೆಯಲು ಅರ್ಹರು.

## ಸಂವಿಧಾನ ಪರಿಚ್ಛೇದ 164(1ಬಿ) ಹೇಳುವುದೇನು?

ವಿಧಾನಸಭೆ ಅಥವಾ ವಿಧಾನ ಪರಿಷತ್ ಸದಸ್ಯ ಅನರ್ಹತೆಗೆ ಒಳಗಾದರೆ, ಅನರ್ಹಗೊಂಡ ದಿನದಿಂದ ವಿಧಾನಸಭೆ ಅವಧಿ ಪೂರ್ಣಗೊಳ್ಳುವವರೆಗೆ ಅಥವಾ ಚುನಾವಣೆ ಎದುರಿಸಿ ವಿಧಾನಸಭೆ ಅಥವಾ ವಿಧಾನಪರಿಷತ್‌ಗೆ ಮರು ಆಯ್ಕೆ ಆಗುವವರೆಗೂ ಸಚಿವ ಸ್ಥಾನ ಪಡೆಯಲು ಅವಕಾಶ ಇರುವುದಿಲ್ಲ.